# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಸಿ.ಎಂ.ಇಬ್ರಾಹಿಂ, ಮಾನ್ಯ ಉಪಾಧ್ಯಕ್ಷರು, ರಾಜ್ಯ ಯೋಜನಾ ಮಂಡಳಿ ಇವರ ವೈದ್ಯಕೀಯ ವೆಚ್ಚ ಮರುಪಾವತಿಸುವ ಬಗ್ಗೆ.

ಓದಲಾಗಿದೆ: 1. ಮಾನ್ಯ ಉಪಾಧ್ಯಕ್ಷರ ಆಪ್ತ ಸಹಾಯಕರು, ರಾಜ್ಯ ಯೋಜನಾ ಮಂಡಳಿ, ಇವರ ಪತ್ರ ಸಂಖ್ಯೆ: KSPB/Dyc-01/503/015, ದಿನಾಂಕ:15.09.2016.
2. ನಿರ್ದೇಶಕರು, ಆಯುರ್ವೇದ, ಯೋಗ ಮತ್ತು ನ್ಯಾಚುರೋಪತಿ, ಯುನಾನಿ ಸಿದ್ಧ ಮತ್ತು ಹೋಮಿಯೋಪತಿ (ಆಯುಷ್) ಇಲಾಖೆ ಧನ್ವಂತ್ರಿ ರಸ್ತೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಆಯುಷ್/127/ಐಜಸಿ(5)2016-17, ದಿನಾಂಕ:09.03.2017.

## ಪ್ರಸ್ತಾವನೆ:

ಶ್ರೀ ಸಿ.ಎಂ.ಇಬ್ರಾಹಿಂ, ಮಾನ್ಯ ಉಪಾಧ್ಯಕ್ಷರು, ರಾಜ್ಯ ಯೋಜನಾ ಮಂಡಳಿ, ಇವರು ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಹಾಸನ ಇಲ್ಲಿ ವೈದ್ಯಕೀಯ ಚಿಕಿತ್ಸೆ ಪಡೆದಿದ್ದು, ಚಿಕಿತ್ಸಾ ಮೊತ್ತ ರೂ.40,550/- ಗಳ ಬಿಲ್ಲನ್ನು ಸಲ್ಲಿಸಿ, ಸದರಿ ಬಿಲ್‌ನ ಮೊತ್ತವನ್ನು ಮರುಪಾವತಿಸುವಂತೆ ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಪತ್ರದಲ್ಲಿ ಮಾನ್ಯ ಉಪಾಧ್ಯಕ್ಷರ ಆಪ್ತ ಸಹಾಯಕರು ಕೋರಿರುತ್ತಾರೆ.

ಮಾನ್ಯ ಉಪಾಧ್ಯಕ್ಷರು ಪಡೆದಿರುವ ಆಯುರ್ವೇದ ಚಿಕಿತ್ಸಾ ವೆಚ್ಚಕ್ಕೆ ರೂ.15,699/- ಗಳು ಅರ್ಹತಾ ಮೊತ್ತವಾಗಿದ್ದು, ಇನ್ನುಳಿದಂತೆ ಬೆಡ್ ಚಾರ್ಜಸ್, ಲ್ಯಾಬ್‌ಚಾರ್ಜಸ್ ಮತ್ತು ಇತರೆ ವೆಚ್ಚಗಳನ್ನು ತಮ್ಮ ಹಂತದಲ್ಲಿಯೇ ನಿಯಮಾನುಸಾರ ಮರುಪಾವತಿಸಲು ಕ್ರಮ ವಹಿಸಬಹುದೆಂದು ನಿರ್ದೇಶಕರು, ಆಯುರ್ವೇದ, ಯೋಗ ಮತ್ತು ನ್ಯಾಚುರೋಪತಿ, ಯುನಾನಿ ಸಿದ್ಧ ಮತ್ತು ಹೋಮಿಯೋಪತಿ (ಆಯುಷ್) ಇಲಾಖೆ ಧನ್ವಂತ್ರಿ ರಸ್ತೆ, ಬೆಂಗಳೂರು ಇವರು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಪತ್ರದಲ್ಲಿ ತಿಳಿಸಿರುತ್ತಾರೆ.

ಪ್ರಸ್ತಾವನೆಯ ಬಗ್ಗೆ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ:ಸಿಡಿ 79 ಎಸ್‌ಪಿಐ 2015, ಬೆಂಗಳೂರು, ದಿನಾಂಕ:15.03.2017.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಸಿ.ಎಂ.ಇಬ್ರಾಹಿಂ, ಮಾನ್ಯ ಉಪಾಧ್ಯಕ್ಷರು, ರಾಜ್ಯ ಯೋಜನಾ ಮಂಡಳಿ ಇವರಿಗೆ Karnataka Ministers, Ministers of State, Deputy Ministers (Medical Attendance) Rules, 1958 ರ ನಿಯಮ 10 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ನಿಯಮ 7 ನ್ನು ಸಡಿಲಿಸಿ, ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಹಾಸನ ಇಲ್ಲಿ ಪಡೆದಿರುವ ಚಿಕಿತ್ಸಾ ವೆಚ್ಚದಲ್ಲಿ ವೈದ್ಯಕೀಯ ಮಂಡಳಿಯ ಶಿಫಾರಸ್ಸಿನಂತೆ ರೂ. 15,699/- ಗಳನ್ನು ಹಾಗೂ ಬೆಡ್ ಚಾರ್ಜಸ್, ಲ್ಯಾಬ್‌ಚಾರ್ಜಸ್ ಮತ್ತು ಇತರೆ ವೆಚ್ಚಗಳಿಗೆ ಸಂಬಂಧಿಸಿದಂತೆ ರೂ.16,000/- ಗಳು ಸೇರಿದಂತೆ ಒಟ್ಟು ರೂ.31,699/- (ಮೂವತ್ತೊಂದು ಸಾವಿರದ ಆರುನೂರ ತೊಂಬತ್ತೊಂಬತ್ತು ರೂಪಾಯಿಗಳು ಮಾತ್ರ) ಗಳ ವೈದ್ಯಕೀಯ ವೆಚ್ಚವನ್ನು ಮರುಪಾವತಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಈ ವೆಚ್ಚವನ್ನು ಆಯವ್ಯಯ ಲೆಕ್ಕ ಶೀರ್ಷಿಕೆ "3451-00-101-4-00-021 (ಯೋಜನೇತರ) ವೈದ್ಯಕೀಯ ವೆಚ್ಚದ ಮರುಪಾವತಿ" ಅಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಪಿಡಿ 136 ಎಸ್‌ಪಿಐ 2016, ದಿನಾಂಕ:02.01.2017 ರಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಲಲಿತ)
ಸರ್ಕಾರದ ಅಧೀನ ಕಾರ್ಯದರ್ಶಿ-3
ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು
ಸಾಂಖ್ಯಿಕ ಇಲಾಖೆ.

ಇವರಿಗೆ:

1) ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆಪೆಟ್ಟಿಗೆ ಸಂಖ್ಯೆ 5329, ಬೆಂಗಳೂರು- 560 001.
2) ಮಾನ್ಯ ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ, ವಿಕಾಸ ಸೌಧ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಸದಸ್ಯ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
4) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5) ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6) ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನ ಸೌಧ, ಬೆಂಗಳೂರು.
7) ಸರ್ಕಾರದ ಅಧೀನ ಕಾರ್ಯದರ್ಶಿ-1 & 2, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು (ಕಾಂಪೆಂಡಿಯಂಗಾಗಿ)
8) ಸಹಾಯಕ ಖಜಾನಾಧಿಕಾರಿ, ಎಸ್‌-3 ಶಾಖೆ, ರಾಜ್ಯ ಯೋಜನಾ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
9) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.